ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ಸುತ್ತೋಲೆ

ಕಾರ್ಯನಿರ್ವಾಹಕ ನಿರ್ದೇಶಕರ ಕಚೇರಿ,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ,
18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು – 560 012

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸ್ಪರ್ಧಾತ್ಮಕ ಪರೀಕ್ಷೆ–2017ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ.**

**ವೇಳಾಪಟ್ಟಿ**

| ದಿನಾಂಕ / ದಿನ | ಸಮಯ | ಪತ್ರಿಕೆ | ವಿಷಯ | ಅಂಕಗಳು |
|---|---|---|---|---|
| 29–01–2017<br>ಭಾನುವಾರ | ಬೆ. 10.30 ರಿಂದ ಮ. 12.30 | ಪತ್ರಿಕೆ –1 | ಸಾಮಾನ್ಯ ಜ್ಞಾನ, ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲೀಷ್ | 200 |
| | ಮ. 2.30 ರಿಂದ ಸಂ.4.30 | ಪತ್ರಿಕೆ –2 | "ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಜ್ಞಾನ – ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಹಾಗೂ ನಿಯಮಗಳು ಮತ್ತು ತಿದ್ದುಪಡಿಗಳಂತೆ" | 200 |

**<u>ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು</u>**

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ. ಸಂ | ಬೆಲ್ ಸಂಖ್ಯೆ | ಬೆಳಗಿನ ಅವಧಿ | ಮಧ್ಯಾಹ್ನದ ಅವಧಿ | ವಿವರಗಳು |
|---|---|---|---|---|
| 01 | ಮೊದಲನೇ ಬೆಲ್ | ಬೆ.10.00 | ಮ. 2.00 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿಯನ್ನು ತೋರಿಸಿದರೆ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ ಮತ್ತು ಪ್ರವೇಶ ಪತ್ರದಲ್ಲಿ ಸಹಿ ಮಾಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ವಿತರಿಸುತ್ತಾರೆ.<br>• ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ **ತಮ್ಮ ಹೆಸರನ್ನು ಬರೆಯಬೇಕು ಮತ್ತು ಎಚ್ಚರದಿಂದ ನೊಂದಣಿ ಸಂಖ್ಯೆಯನ್ನು** ಬರೆದು ಸಂಬಂಧಿಸಿದ ವೃತ್ತಗಳನ್ನು ತಪ್ಪದೇ ತುಂಬಬೇಕು. |
| 02 | ಎರಡನೇ ಬೆಲ್ | ಬೆ.10.15 | ಮ. 2.15 | • **ಬೆ.10.20ಕ್ಕೆ / ಮ.2.20** ಕ್ಕೆ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು/ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. **"ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ"**. ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>• ನಂತರ ಕೊಠಡಿ ಮೇಲ್ವಿಚಾರಕರು **ಬೆ. 10.25 ಕ್ಕೆ / ಮ. 2.25ಕ್ಕೆ** ಲಕೋಟೆಯನ್ನು ತೆರೆದು ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ/ಸಿಬ್ಬಂದಿ ವರ್ಗ/ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು/ಪ್ರಶ್ನೆ ಪತ್ರಿಕಾ ಪಾಲಕರು/ಅಧ್ಯಕ್ಷರು/ಕಾರ್ಯದರ್ಶಿ/ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕ್ರಮ ಸಂಖ್ಯೆಯನ್ನು ಮತ್ತು ಎಚ್ಚರದಿಂದ ವರ್ಷನ್ ಕೋಡ್ ಅನ್ನು ಬರೆದು ಸಂಬಂಧಿಸಿದ ವೃತ್ತಗಳನ್ನು ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ತಪ್ಪದೇ ತುಂಬಬೇಕು. ನಂತರ ಓ.ಎಂ.ಆರ್ ಉತ್ತರ ಪತ್ರಿಕೆಯ ನಿಗದಿತ ಜಾಗದಲ್ಲಿ ಸಹಿಯನ್ನೂ ಮಾಡಬೇಕು.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಬೆ.10.30 | ಮ.2.30 | • ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರು ಪುಸ್ತಕವನ್ನು ತೆರೆದು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>• ಈ ಬೆಲ್ ಅಂದರೆ **ಬೆ.10.30 / ಮ. 2.30** ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಬೆ.11.30 | ಮ.3.30 | • ಇದು ಮೊದಲನೆಯ ಎಚ್ಚರಿಕೆ ಬೆಲ್ – **ಪರೀಕ್ಷೆಯ ಒಂದು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ** |
| 05 | ಐದನೇ ಬೆಲ್ | ಮ.12.00 | ಸಂ. 4.00 | • ಇದು ಎರಡನೆಯ ಎಚ್ಚರಿಕೆ ಬೆಲ್ – **ಪರೀಕ್ಷೆಯ ಒಂದು ಗಂಟೆ ಮೂವತ್ತು ನಿಮಿಷಗಳ ಅವಧಿ ಮುಗಿದಿರುವುದಕ್ಕಾಗಿ** |
| 06 | ಆರನೇ ಬೆಲ್ | ಮ.12.25 | ಸಂ. 4.25 | • ಇದು ಕೊನೆಯ ಎಚ್ಚರಿಕೆಯ ಬೆಲ್ ಕೊಠಡಿ ಮೇಲ್ವಿಚಾರಕರು **ಅಭ್ಯರ್ಥಿಗಳಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ** ಎಂದು ತಿಳಿಸುತ್ತಾರೆ. |
| 07 | ಏಳನೇ ಹಾಗೂ ಕೊನೆಯ ಬೆಲ್ | ಮ.12.30 | ಸಂ. 4.30 | • ಪರೀಕ್ಷೆ ಮುಕ್ತಾಯ.<br>• ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಎಡಗೈ ಹೆಬ್ಬರಳ ಗುರುತನ್ನು ಹಾಕಲು ಹೇಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಪಡೆಯುವುದು.<br>ಮುಖ್ಯವಾದುದು: **ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಓ.ಎಂ.ಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು.**<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕೆಇಎ ಪ್ರತಿ) ನಿಧಾನವಾಗಿ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯ ಜೊತೆಯಲ್ಲಿ ಹಿಂದಿರುಗಿಸಬೇಕು. |

ಸಹಿ/–
ಕಾರ್ಯನಿರ್ವಾಹಕ ನಿರ್ದೇಶಕರು

ಸೂಚನೆ:

1. ಪ್ರವೇಶ ಪತ್ರವು ದ್ವಿಪ್ರತಿಯುಳ್ಳದ್ದಾಗಿರುತ್ತದೆ, ಒಂದು ಅಭ್ಯರ್ಥಿಯ ಪ್ರತಿ, ಮತ್ತೊಂದು ಕೆಇಎ ಪ್ರತಿ. ಅಭ್ಯರ್ಥಿಯು ನಿಗದಿತ ಎರಡೂ ಸ್ಥಳಗಳಲ್ಲಿ ಅವನ / ಅವಳ ಇತ್ತೀಚಿನ ಬಣ್ಣದ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ ಲಗತ್ತಿಸಿ, ಭಾವಚಿತ್ರದ ಮೇಲೆ ಗೆಜೆಟೆಡ್ ಅಧಿಕಾರಿಯ ಮೊಹರು ಮತ್ತು ಸಹಿ ಪಡೆಯಬೇಕು.
2. ಅಭ್ಯರ್ಥಿಯು ಎರಡೂ ಪ್ರತಿಯ ಪ್ರವೇಶ ಪತ್ರವನ್ನು ಕಡ್ಡಾಯವಾಗಿ ತನ್ನೊಡನೆ ಪರೀಕ್ಷಾ ಕೊಠಡಿಯೊಳಗೆ ತೆಗೆದುಕೊಂಡು ಹೋಗಬೇಕು. ಎರಡನೇ ಅವಧಿಯ ಪರೀಕ್ಷೆ ಮುಗಿದ ನಂತರ ಕೆಇಎ ಪ್ರತಿಯನ್ನು ಕೊಠಡಿ ಮೇಲ್ವಿಚಾರಕರಿಗೆ ನೀಡಬೇಕು.